ಪರಿಣಾಮ ಮತ್ತು ಸರ್ಕಾರದ ಮೇಲೆ ಆಗುವ ಆರ್ಥಿಕ ಸ್ಥಿತಿಗತಿಗಳ ಪರಿಣಾಮದ ಹಾಗೂ ಇತರೆ ತತ್ಸಂಬಂಧದ ಪರಿಣಾಮಗಳ ಬಗ್ಗೆ ವಿವಿಧ ಹಂತಗಳಲ್ಲಿ ಮೌಲ್ಯಮಾಪನಗಳನ್ನು ನಡೆಸಿದ ನಂತರ ಅಂತಿಮ ತೀರ್ಮಾನಕ್ಕೆ ಬರಲಾಗುವುದು. ಆದ್ದರಿಂದ ಈ ಹಂತದಲ್ಲಿ ಈ ಪ್ರಶ್ನೆಗಳಿಗೆ ಸ್ಪಷ್ಟ ಹಾಗೂ ನಿಖರವಾದ ಉತ್ತರ ನೀಡಲು ಸಾಧ್ಯತೆ ಇರುವುದಿಲ್ಲ.

ಆ) ಸಾರಾಯಿ ಸಮಾಜದ ಕಡುಬಡವರ ಮತ್ತು ಕೂಲಿ ಕಾರ್ಮಿಕರ ಪಾನೀಯವಾಗಿದ್ದು, ಸಾರಾಯಿಯಿಂದ ಅನೇಕ ಬಡ ಕುಟುಂಬಗಳು ಆರ್ಥಿಕ ಸಂಕಷ್ಟದಲ್ಲಿ ಸಿಲುಕಿದೆ. ಇದಲ್ಲದೆ, ಸ್ತ್ರೀಶಕ್ತಿ ಸ್ವಸಹಾಯಕ ಸಂಘಗಳು, ದಲಿತ ಸಂಘರ್ಷ ಸಮಿತಿಗಳು ಸಾರಾಯಿ ನಿಷೇಧಿಸುವಂತೆ ರಾಜ್ಯದಾದ್ಯಂತ ಪ್ರತಿಭಟನೆಗಳು ನಡೆಸುತ್ತಿದ್ದು, ಸರ್ಕಾರವು ಸಾರಾಯಿ ಸೇವಿಸುವವರ ಆರ್ಥಿಕ ಸ್ಥಿತಿ ಮತ್ತು ಅವರ ಸಾಮಾಜಿಕ ಸ್ಥಿತಿಯನ್ನು ಮನಗಂಡು ಸಾರಾಯಿ ಮಾರಾಟವನ್ನು ಮಾತ್ರ ರದ್ದುಗೊಳಿಸಲು ಚಿಂತನೆ ನಡೆಸಿದೆ.

242 (290) - ಶ್ರೀ ನಿಂಗಪ್ಪ ಹೆಚ್. (ಕುಣಿಗಲ್) - ಮಾನ್ಯ ಉಪ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ತುಮಕೂರು ಜಿಲ್ಲೆಯಲ್ಲಿ ಅದರಲ್ಲೂ ಮುಖ್ಯವಾಗಿ ಕುಣಿಗಲ್‌ನಲ್ಲಿರುವ ಕೆರೆಗಳು ಹೂಳಿನಿಂದ ತುಂಬಿ ಹೋಗಿ ಅವಶ್ಯಕ ನೀರು ಶೇಕರಣೆಯಾಗದೇ ಅಂತರ್ಜಲ ಮಟ್ಟ ಕುಸಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಆ) ಬಂದಿದ್ದಲ್ಲಿ, ಜಲ ಸಂವರ್ಧನೆಯ ಕಾರ್ಯಕ್ರಮವನ್ನು ಪ್ರಾರಂಭಿಸಬಹುದಲ್ಲವೆ ; ಈ ನಿಟ್ಟಿನಲ್ಲಿ ಸರ್ಕಾರ ಮುಂದಾಗುವುದೇ ;

ಇ) ಹಾಗಿದ್ದಲ್ಲಿ, ಯಾವ ಅವಧಿಯೊಳಗಾಗಿ ಈ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುವುದು ?

ಶ್ರೀ ಬಿ.ಎಸ್. ಯಡಿಯೂರಪ್ಪ (ಉಪ ಮುಖ್ಯಮಂತ್ರಿಗಳು ಹಾಗೂ ಸಣ್ಣ ನೀರಾವರಿ)-

ಅ) ಬಂದಿದೆ.

ಆ) ವಿಶ್ವಬ್ಯಾಂಕ್ ನೆರವಿನಿಂದ ಜಲ ಸಂವರ್ಧನೆ ಯೋಜನಾ ಸಂಘವು ರಾಜ್ಯದ 9 ಜಿಲ್ಲೆಗಳ 34 ತಾಲ್ಲೂಕುಗಳ 2005 ಕೆರೆಗಳ ಅಭಿವೃದ್ಧಿ ಕಾರ್ಯವನ್ನು ಕೈಗೊಳ್ಳುತ್ತಿದ್ದು, ಕೇಂದ್ರ ಸರ್ಕಾರದ ಸಲಹೆಯ ಮೇರೆಗೆ

ಕುಣಿಗಲ್ ತಾಲ್ಲೂಕೂ ಸೇರಿದಂತೆ ಕಾವೇರಿ ನದಿ ಪಾತ್ರದಲ್ಲಿ ಬರುವ ಯಾವ ತಾಲ್ಲೂಕನ್ನೂ ಸೇರಿಸಿಲ್ಲ. ಇದರಿಂದಾಗಿ ಕುಣಿಗಲ್ ತಾಲ್ಲೂಕಿನಲ್ಲಿ ಜಲ ಸಂವರ್ಧನಾ ಯೋಜನೆಯ ಕಾರ್ಯಕ್ರಮ ಹಮ್ಮಿಕೊಳ್ಳಲು ಸಾಧ್ಯವಾಗಿಲ್ಲ.

ಇ) ಪ್ರಶ್ನೆ ಉದ್ಭವಿಸುವುದಿಲ್ಲ.

244 (801) – ಶ್ರೀ ಪಾಟೀಲ್ ಡಿ.ಆರ್. (ಗದಗ್) – ಮಾನ್ಯ ಉಪ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸರ್ಕಾರದ ಬೊಕ್ಕಸಕ್ಕೆ ಬರುವ ಆದಾಯದ ಮೂಲಗಳು ಯಾವುವು ;

ಆ) ಕಳೆದ ಮೂರು ವರ್ಷಗಳಲ್ಲಿ ಆದಾಯದ ಮೂಲಗಳಿಂದ ಸರ್ಕಾರಕ್ಕೆ ಬಂದ ಆದಾಯವೆಷ್ಟು ; (ವರ್ಷಾವಾರು ಆದಾಯದ ಮೂಲವಾರು ವಿವರ ನೀಡುವುದು) ;

ಇ) ಸರ್ಕಾರದ ಒಟ್ಟು ಆದಾಯದಲ್ಲಿ ಬರಪೀಡಿತ ಪ್ರದೇಶದ ಅಭಿವೃದ್ಧಿಗಾಗಿ ಸರ್ಕಾರ ಮಾಡಿದ ವೆಚ್ಚವೆಷ್ಟು ; (ಕಳೆದ ಮೂರು ವರ್ಷದ ವರ್ಷಾವಾರು ವಿವರ ನೀಡುವುದು) ?

ಶ್ರೀ ಬಿ.ಎಸ್. ಯಡಿಯೂರಪ್ಪ (ಉಪ ಮುಖ್ಯಮಂತ್ರಿಗಳು)–

ಅ) ರಾಜ್ಯ ಸರ್ಕಾರವು ಈ ಕೆಳಕಂಡ ತೆರಿಗೆಗಳಿಂದ ಆದಾಯವನ್ನು ಸಂಗ್ರಹಿಸುತ್ತದೆ:

1. ವಾಣಿಜ್ಯ ತೆರಿಗೆ
2. ಅಬಕಾರಿ ತೆರಿಗೆ
3. ವಾಹನಗಳ ಮೇಲಿನ ತೆರಿಗೆ
4. ಮುದ್ರಾಂಕ ಮತ್ತು ನೋಂದಣಿ ಶುಲ್ಕ
5. ಭೂಕಂದಾಯ
6. ವಿದ್ಯುಚ್ಛಕ್ತಿ ಮೇಲಿನ ತೆರಿಗೆ ಮತ್ತು ಶುಲ್ಕ
7. ಇತರೆ ತೆರಿಗೆ ಮತ್ತು ಶುಲ್ಕ
8. ಕೇಂದ್ರದಿಂದ ಹಂಚಿಕೆಯಾಗುವ ತೆರಿಗೆ ಮತ್ತು ಶುಲ್ಕ
9. ಕೇಂದ್ರದಿಂದ ಸಹಾಯಾನುದಾನ

ಆ) ಕಳೆದ ಮೂರು ವರ್ಷಗಳಲ್ಲಿ ಆದಾಯದ ಮೂಲಗಳಿಂದ ಸರ್ಕಾರಕ್ಕೆ ಬಂದ ಆದಾಯದ ವಿವರ ಈ ಕೆಳಕಂಡಂತಿದೆ: